5. **ವೈಭವ ತೆರಿಗೆ:** ಕಲ್ಯಾಣ ಮಂಟಪಗಳಿಗೆ ವೈಭವ ತೆರಿಗೆ ವಿಧಿಸಿದ್ದರಿಂದ ಮತ್ತು ತೆರಿಗೆ ದರಗಳಲ್ಲಿ ಮಾರ್ಪಾಡು ಹಾಗೂ ಹೊಸ ಹೋಟೆಲ್ ಉದ್ಯಮಗಳ ಸ್ಥಾಪನೆಯಿಂದ ಸಂಗ್ರಹಣೆ ಹೆಚ್ಚಾಗಿದೆ.

6. **ಕೃಷಿ ವರಮಾನ ತೆರಿಗೆ:** ಕಾಫಿ ಬೀಜದ ಬೆಲೆ ಕಡಿಮೆಯಾದುದರಿಂದ ಸಂಗ್ರಹಣೆಯಲ್ಲಿ ಕಡಿಮೆ ಆಗಿದೆ.

7. **ವೃತ್ತಿ ತೆರಿಗೆ:** ಗುತ್ತಿಗೆದಾರರನ್ನು ಮತ್ತು ಸ್ವಯಂ ಉದ್ಯೋಗಿಗಳನ್ನು ವೃತ್ತಿ ತೆರಿಗೆ ವ್ಯಾಪ್ತಿಯಲ್ಲಿ ಸರ್ವೆ ಮಾಡಿ, ನೋಂದಾಯಿಸಿರುವುದರಿಂದ ಸಂಗ್ರಹಣೆ ಹೆಚ್ಚಾಗಿದೆ.

ಇ) ರೂ. 1367. 19 ಕೊಟಿ.

ರೂ. 4855.00 ಕೋಟಿ.

ವಿಷಯ: ದ.ಕನ್ನಡ ಜಿಲ್ಲೆಯ ಪಶುಸಂಗೋಪನಾ ಇಲಾಖೆಯಲ್ಲಿರುವ ಖಾಲಿ ಹುದ್ದೆಗಳ ಭರ್ತಿ.

2761 (4174)

ಶ್ರೀ ಯು.ಆರ್.ಸಭಾಪತಿ (ಉಡುಪಿ): ಮಾನ್ಯ ಪಶುಸಂಗೋಪನಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪಶುಸಂಗೋಪನಾ ಇಲಾಖೆಯಲ್ಲಿ ಖಾಲಿ ಇರುವ ಪಶುವೈದ್ಯಾಧಿಕಾರಿಗಳು, ಪಶುವೈದ್ಯ ಪರೀಕ್ಷಕರು, ಪಶುವೈದ್ಯ ಸಹಾಯಕರುಗಳ ಸಂಖ್ಯೆ ಎಷ್ಟು

ಆ) ಈ ಹುದ್ದೆಗಳು ಖಾಲಿ ಇರುವುದರಿಂದ ದೈನಂದಿನ ಪಶುಗಳ ಆರೈಕೆ ಮತ್ತು ಚಿಕಿತ್ಸೆಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಬಂದಿದ್ದಲ್ಲಿ ಈ ಹುದ್ದೆಗಳನ್ನು ತುಂಬಲು ಸರ್ಕಾರದವರು ಕೈಗೊಳ್ಳಲಿರುವ ಕ್ರಮಗಳೇನು (ವಿವರ ನೀಡುವುದು)?

ಶ್ರೀ ಬಿ.ಬಿ.ನಿಂಗಯ್ಯ (ಪಶುಸಂಗೋಪನಾ ರಾಜ್ಯ ಸಚಿವರು):

ಅ) ಹುದ್ದೆಗಳ ವಿವರ ಖಾಲಿ ಇರುವುದು

1) ಪಶುವೈದ್ಯಾಧಿಕಾರಿಗಳು: 12

2) ಪಶುವೈದ್ಯ ಪರೀಕ್ಷಕರು: 72

3) ಪಶುವೈದ್ಯ ಸಹಾಯಕರು: 105

ಆ) ಬಂದಿದೆ.

ಇ) 1) ಪಶುವೈದ್ಯ ಅಧಿಕಾರಿಗಳ ಹುದ್ದೆಗಳನ್ನು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳ ಆಯ್ಕೆಗಾಗಿ ಕರ್ನಾಟಕ ಲೋಕಸೇವಾ ಆಯೋಗವನ್ನು ಕೋರಲಾಗಿದ್ದು, ಅಭ್ಯರ್ಥಿಗಳ ಸಂದರ್ಶನ ಕಾರ್ಯವು ನಡೆಯುತ್ತಿದೆ.

2) ಪಶುವೈದ್ಯಕೀಯ ಪರೀಕ್ಷಕರ ಹುದ್ದೆಗಳನ್ನು ಪಶುವೈದ್ಯಕೀಯ ಸಹಾಯಕರಿಗೆ ಮುಂಬಡ್ತಿ ನೀಡುವ ಮೂಲಕ ಹಾಗೂ ನೇರ ನೇಮಕಾತಿ ಮೂಲಕ ತುಂಬಲು ತರಬೇತಿ ಪಡೆದ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

3) ಪಶುವೈದ್ಯಕೀಯ ಸಹಾಯಕರ ಹುದ್ದೆಗಳನ್ನು ತರಬೇತಿ ಪಡೆದ ಅಭ್ಯರ್ಥಿಗಳಿಂದ ತುಂಬಬೇಕಾಗಿರುತ್ತದೆ; ತರಬೇತಿ ಪಡೆದ ಅಭ್ಯರ್ಥಿಗಳು ಲಭ್ಯವಾದ ಕೂಡಲೇ ಕ್ರಮ ತೆಗೆದುಕೊಳ್ಳಲಾಗುವುದು.

ವಿಷಯ: ಪಶುಸಂಗೋಪನಾ ಇಲಾಖೆಯಲ್ಲಿರುವ ಖಾಲಿ ಇರುವ ಹುದ್ದೆಗೆ ನೇಮಕಾತಿಗಳು.

2762 (4173)

ಶ್ರೀ ಯು.ಆರ್.ಸಭಾಪತಿ (ಉಡುಪಿ): ಮಾನ್ಯ ಪಶುಸಂಗೋಪನಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪಶುಸಂಗೋಪನಾ ಇಲಾಖೆಯಲ್ಲಿ ಖಾಲಿ ಇರುವ ಪಶುವೈದ್ಯಾಧಿಕಾರಿಗಳು, ಪಶುವೈದ್ಯ ಪರೀಕ್ಷಕರು, ಪಶುವೈದ್ಯ ಸಹಾಯಕರುಗಳ ಸಂಖ್ಯೆ ಎಷ್ಟು?

ಆ) ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?